ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಸದನದಲ್ಲಿ ಮಂಡಿಸಲಾದ ಉತ್ತರಗಳು

ಪಡಿತರ ಕಾರ್ಡ್ ವಿತರಣೆ

(ಅನುಬಂಧ–1)

185(291); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಲೋಕಸಭಾ ಚುನಾವಣಾ ನೀತಿ ಸಂಹಿತೆಯಿಂದ ಆನ್‌ಲೈನ್ ಪಡಿತರ ಚೀಟಿಗಳ ವಿಲೇವಾರಿ ಹಾಗೂ ಅರ್ಜಿ ಸಲ್ಲಿಸುವಿಕೆ ಪ್ರಕ್ರಿಯೆ ನಿಲುಗಡೆ ಆಗಿತ್ತು, ಇದುವರೆಗೆ ಅದು ಪ್ರಾರಂಭವಾಗದೆ ಇರುವುದರಿಂದ ಮುದ್ರಣಗೊಂಡ ಕಾರ್ಡುಗಳ ವಿತರಣೆ ಹಾಗೂ ಬಾಕಿ ಇರುವ ಅರ್ಜಿಗಳ ವಿಲೇವಾರಿ ಸ್ಥಗಿತಗೊಂಡಿರುವುದರಿಂದ ಅರ್ಜಿದಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಯಾವಾಗ ಈ ಪ್ರಕ್ರಿಯೆ ಪುನಃ ಪ್ರಾರಂಭವಾಗುವುದು?

ಶ್ರೀ ದಿನೇಶ್ ಗುಂಡೂರಾವ್ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಸಚಿವರು.)

ಅ) ಹೌದು. ಸರ್ಕಾರದ ಗಮನಕ್ಕೆ ಬಂದಿದೆ.

ಆ) ಮುದ್ರಣಗೊಂಡ ಕಾರ್ಡುಗಳ ವಿತರಣೆ ಪ್ರಕ್ರಿಯೆಯನ್ನು ಈಗಾಗಲೇ ಪ್ರಾರಂಭಿಸಲಾಗಿದೆ. ಹಾಗೂ ಜನರೇಟ್ ಮಾಡಲಾಗಿರುವ ಪಡಿತರ ಚೀಟಿಗಳನ್ನು ಮುದ್ರಿಸಿಕೊಡುವ ಪ್ರಕ್ರಿಯೆಯೂ ಪ್ರಾರಂಭವಾಗಿರುತ್ತದೆ. ಬಾಕಿ ಇರುವ ಅರ್ಜಿಗಳನ್ನು First in - First out (FIFO) ಮಾದರಿಯಲ್ಲಿ ವಿಲೆಗೊಳಿಸಲು ಕ್ರಮವಹಿಸಲಾಗುತ್ತದೆ.

ಯೋಜನೆಗಳ ವಿವರ

186(292); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಹಿಂದುಳಿದ ವರ್ಗದ ಜನರಿಗೆ ಹಾಗೂ ಅಲೆಮಾರಿ, ಅರೆ ಅಲೆಮಾರಿ ಜನಾಂಗದವರಿಗೆ ಸರ್ಕಾರ ರೂಪಿಸಿದ ಯೋಜನೆಗಳು ಯಾವುವು;